ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಯೋಜನೆ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1441 (1703) ಮಾನ್ಯ ಪ್ರಾಥಮಿಕ ಮತ್ತು ಪೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (ಆರ್.ಎಂ.ಎಸ್.) ಯೋಜನೆಯಡಿ ಹೊಸ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳು ಸ್ಥಗಿತಗೊಂಡಿರುವುದು ಸರ್ಕಾರzಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸದರಿ ಯೋಜನೆಯನ್ನು ಮುಂದುವರೆಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; (ವಿವರ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ (ಆರ್.ಎಂ.ಎಸ್) ಯೋಜನೆಯಡಿ ಸ್ಥಗಿತಗೊಂಡಿರುವ ಹೊಸ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು ; ಹಾಗೂ ಈ ಕಾಮಗಾರಿಗಳನ್ನು ಮುಂದುವರೆಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? (ವಿವರ ನೀಡುವುದು)